(14)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ 2013-14ರ ಸಾಲಿನ ಯೋಜನಾ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1) ದಿನಾಂಕ: 12-07-2013ರ ಪರಿಷ್ಕೃತ ಆಯವ್ಯಯ.
2) ಸರ್ಕಾರಿ ಆದೇಶ ಸಂಖ್ಯೆ: ಕೃಇ 10 ಕೃವಿಶಿ 2013, ದಿನಾಂಕ: 04-06-2013
3) ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ: 24-07-2013ರ ಪತ್ರ ಸಂಖ್ಯೆ: ಹನಿಅ/ಕೃತೋವಿಶಿ /193/2013-14.

**** *** ****

**ಪ್ರಸ್ತಾವನೆ:-**

2013-14ನೇ ಸಾಲಿನ ಆಯವ್ಯಯದಲ್ಲಿ ರೂ. 2900.00 ಲಕ್ಷಗಳ ಯೋಜನಾ ಅನುದಾನವನ್ನು (ಆಸ್ತಿಗಳ ಸೃಜನೆಗಾಗಿ)ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ ನಿಗದಿಗೊಳಿಸಲಾಗಿತ್ತು. ಈ ಪೈಕಿ ಸರ್ಕಾರವು ಮೇಲೆ ಓದಲಾದ (2)ರ ಆದೇಶದಲ್ಲಿ ರೂ. 725.00 ಲಕ್ಷಗಳನ್ನು ಬಿಡುಗಡೆ ಮಾಡಿದೆ. ದಿನಾಂಕ: 12-07-2013ರಂದು ಮಾನ್ಯ ಮುಖ್ಯ ಮಂತ್ರಿಯವರು 2013-14ನೇ ಸಾಲಿಗೆ ಹೊಸ ಆಯವ್ಯಯ ಭಾಷಣವನ್ನು ಮಂಡಿಸಿರುತ್ತಾರೆ. ಅದರಂತೆ ಮೇಲೆ ಓದಲಾದ-1ರಲ್ಲಿ, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಯೋಜನೆ ಅನುದಾನವಾಗಿ ಈ ಕೆಳಕಂಡಂತೆ ನಿಗದಿಗೊಳಿಸಿದೆ:

- ಲೆಕ್ಕಶೀರ್ಷಿಕೆ 2415-277--5-01-101 ಸಹಾಯಾನುದಾನ -- ವೇತನ ರೂ. 1000.00 ಲಕ್ಷಗಳು
- ಲೆಕ್ಕಶೀರ್ಷಿಕೆ 2415-277-05-01-102 ಸಹಾಯಾನುದಾನ - ಆಸ್ತಿಗಳ ಸೃಜನೆಗಾಗಿ ರೂ. 1293.00 ಲಕ್ಷಗಳು
- ಲೆಕ್ಕಶೀರ್ಷಿಕೆ 2415-277-05-01-103 ಸಹಾಯಾನುದಾನ - ಸಾಮಾನ್ಯ ರೂ. 1642.00 ಲಕ್ಷಗಳು

ಮೇಲೆ ಓದಲಾದ(3)ರ ದಿನಾಂಕ: 24-07-2013ರ ಪತ್ರದಲ್ಲಿ, ಪರಿಷ್ಕೃತ ಆಯವ್ಯಯ ಅವಕಾಶದಂತೆ ಆಸ್ತಿಗಳ ಸೃಜನೆಗಾಗಿ ಈಗ ಹಂಚಿಕೆಯಾಗಿರುವ ರೂ. 1293.00 ಲಕ್ಷಗಳ ಪೈಕಿ ಈಗಾಗಲೇ ರೂ. 725.00 ಲಕ್ಷಗಳನ್ನು ಬಿಡುಗಡೆ ಮಾಡಿರುವ ಕಾರಣದಿಂದ ಆಸ್ತಿಗಳ ಸೃಜನೆ ಉದ್ದೇಶಕ್ಕೆ ಈಗ 2ನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡುವಂತಿಲ್ಲವಾದರೂ. ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಅಭಿವೃದ್ಧಿಯ ಕಾಮಗಾರಿಗಳು ಪ್ರಗತಿಯಲ್ಲಿದ್ದು ಹಣದ ಅವಶ್ಯಕತೆ

ಇರುವುದರಿಂದ ಉಳಿದ ರೂ. 568.00 ಲಕ್ಷಗಳನ್ನು ಬಿಡುಗಡೆ ಮಾಡಲು ಹಾಗೂ ಶಿಕ್ಷಣ ಸಹಾಯನುದಾನ – ವೇತನಗಳಿಗಾಗಿ ರೂ. 1000.00 ಲಕ್ಷಗಳು ಮತ್ತು ಸಾಮಾನ್ಯಕ್ಕಾಗಿ ರೂ. 1642.00 ಲಕ್ಷಗಳು ಯೋಜನೆಯಡಿಯಲ್ಲಿ ಅನುದಾನ ಒದಗಿಸಿದ್ದು, ಅದರಲ್ಲಿ 1 ಮತ್ತು 2ನೇ ತ್ರೈಮಾಸಿಕದ ಸಹಾಯಾನುದಾನವನ್ನು ಬಿಡುಗಡೆ ಮಾಡಿ ಆದೇಶ ಹೊರಡಿಸಬೇಕೆಂದು ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 10 ಕೃವಿಶಿ 2013, ಬೆಂಗಳೂರು, ದಿನಾಂಕ: 26-08-2013**

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ನಿಗದಿಯಾಗಿರುವ ಯೋಜನಾ ಲೆಕ್ಕಶೀರ್ಷಿಕೆ 2415-277-5-01-101 ರಡಿಯಲ್ಲಿ ರೂ. 1000.00 ಲಕ್ಷಗಳ ಪೈಕಿ ರೂ. 500.00 ಲಕ್ಷಗಳು ಮತ್ತು ಲೆಕ್ಕಶೀರ್ಷಿಕೆ 2415-277-5-01-103ರಡಿಯಲ್ಲಿ ರೂ. 1642.00 ಲಕ್ಷಗಳ ಪೈಕಿ ರೂ. 821.00 ಲಕ್ಷಗಳು ಸೇರಿದಂತೆ ಒಟ್ಟು ರೂ. 1321.00 ಲಕ್ಷಗಳನ್ನು (ಒಂದು ಸಾವಿರದ ಮೂರು ನೂರ ಇಪ್ಪತ್ತೊಂದು ಲಕ್ಷ ರೂಪಾಯಿಗಳು ಮಾತ್ರ) ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಅನುದಾನವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಿಕ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಯೋಜನೆ ಅನುದಾನದ ಸಂಶೋಧನಾ ಬಾಬ್ತು ಬಿಡುಗಡೆ ಮಾಡಿದ ಅನುದಾನದ ಶೇಕಡ 50ರಷ್ಟನ್ನು ಸಂಶೋಧನೆ ಮತ್ತು ಅಭಿವೃದ್ಧಿ ಉದ್ದೇಶಗಳಿಗೆ ವಿನಿಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.

...3

- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 23-08-2013ರ ಟಿಪ್ಪಣಿ ಸಂಖ್ಯೆ: ಕೃಇ 153 ಆಂಆಸ 2013ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
(ದೂರವಾಣಿ ಸಂಖ್ಯೆ: 080-2203 2388)

04/9/13

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು - ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**ಪ್ರತಿ:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
3. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ.
4. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ.
7. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

5/9/13

Recd 5 copies